ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/03/ಇ.ಸಿ.ಎಸ್(2)/2021-22

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560001
ದೂ.ಸಂ:080-22200777
E-mail: dte.commissioner@gmail.com

ದಿನಾಂಕ: 01.10.2021.

## ಸುತ್ತೋಲೆ

ವಿಷಯ : ಆಗಸ್ಟ್ 2021 ರ ಡಿಪ್ಲೊಮಾ ಸೆಮಿಸ್ಟರ್ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳಿಂದ ಜರುಗಿದ ಮಾಲ್ ಪ್ರಾಕ್ಟೀಸ್ ಪ್ರಕರಣಗಳು/ವಿದ್ಯಾರ್ಥಿಗಳಿಮದ ಜರುಗಿದ ಲೋಪ ದೋಷ ಪ್ರಕರಣಗಳ ವಿಚಾರಣೆ ನಡೆಸುವ ಕುರಿತು.

ಉಲ್ಲೇಖ : ಈ ಕಛೇರಿ ಕಾರಣ ಕೇಳಿ ನೋಟಿಸ್ ಸಂಖ್ಯೆ: ಬಿಟಿಇ/03/ಇಸಿಎಸ್(2)/2021-22, ದಿನಾಂಕ: 28.09.2021.

*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಪರೀಕ್ಷಾ ಮಂಡಳಿಯ ಆಗಸ್ಟ್ 2021 ರ ಡಿಪ್ಲೊಮಾ ಸೆಮಿಸ್ಟರ್ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ವಿವಿಧ ಸ್ವರೂಪದ ಮಾಲ್ ಪ್ರಾಕ್ಟೀಸ್ ಗಳಲ್ಲಿ ಭಾಗಿಯಾಗಿರುವ/ಲೋಪದೋಷ ಎಸಗಿರುವ ಬಗ್ಗೆ ದೂರುಗಳು ದಾಖಲಾಗಿರುತ್ತವೆ. ಉಲ್ಲೇಖದ ಈ ಕಛೇರಿಯ ಕಾರಣ ಕೇಳಿ ನೋಟಿಸ್ ನಲ್ಲಿ ವಿದ್ಯಾರ್ಥಿಗಳು ಮಾಲ್ ಪ್ರಾಕ್ಟೀಸ್ ಪ್ರಕರಣದ ಬಗ್ಗೆ ಲಿಖಿತ ಹೇಳಿಕೆಯನ್ನು ದಿನಾಂಕ: 05.10.2021 ರೊಳಗೆ ಕಳುಹಿಸಿಕೊಡಲು ತಿಳಿಸಲಾಗಿತ್ತು. ಮಾಲ್ ಪ್ರಾಕ್ಟೀಸ್ ಪ್ರಕರಣಗಳಲ್ಲಿ ಭಾಗಿಯಾಗಿರುವ ವಿದ್ಯಾರ್ಥಿಗಳ ವಿವರಗಳನ್ನು ಸಂಬಂಧಪಟ್ಟ ಸಂಸ್ಥೆಯ/ಪ್ರಾಚಾರ್ಯರ ಇ-ಮೇಲ್ ವಿಳಾಸಕ್ಕೆ ಈಗಾಗಲೇ ಕಳುಹಿಸಿಕೊಡಲಾಗಿದೆ.

ಆದ್ದರಿಂದ ಸಂಸ್ಥೆಯ ಪ್ರಾಚಾರ್ಯರು ಇ-ಮೇಲ್ ಅನ್ನು ಪರಿಶೀಲಿಸಿ ಸಂಬಂಧಪಟ್ಟ ವಿದ್ಯಾರ್ಥಿಗಳಿಂದ ಲಿಖಿತ ಹೇಳಿಕೆ ಪಡೆದು ಕಾರ್ಯದರ್ಶಿಯವರು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು ಇವರಿಗೆ ದಿನಾಂಕ: 05.10.2021 ರೊಳಗೆ ತಲುಪುವಂತೆ ಸಲ್ಲಿಸಲು ಮತ್ತೊಮ್ಮೆ ಈ ಮೂಲಕ ತಿಳಿಸಲಾಗಿದೆ.

ತಪ್ಪಿದ್ದಲ್ಲಿ ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಮುಂದಿನ ಆಗುಹೋಗುಗಳಿಗೆ ಸಂಸ್ಥೆಯ ಪ್ರಾಚಾರ್ಯರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

01/10/2021

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ: ಸಂಬಂಧಪಟ್ಟ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಪ್ರಾಚಾರ್ಯರುಗಳಿಗೆ - ಮುಂದಿನ ಕ್ರಮಕ್ಕಾಗಿ.

ಪ್ರತಿ : ಇ-ಆಡಳಿತ ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲು